ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.

<u>ಸಿ.ಸಿ.1245/2021</u>

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಲೋಹಿತ್ ಸಿ.ಎಂ | ಪಿ.ಡಬ್ಲ್ಯೂ.6 |
| ತಂದೆಯ ಹೆಸರು | : | ಲೇಟ್ ಸಿ.ಕೆ. ಮೂಡಲಗಿರಿಯಪ್ಪ | ಸಿ.ಡಬ್ಲ್ಯೂ.16 |
| ವಯಸ್ಸು | : | 45 ವರ್ಷ | |
| ವೃತ್ತಿ | : | ಹೆಚ್.ಸಿ. ನಂ.104, ಗ್ರಾಮಾಂತರ ಪೊಲೀಸ್ ಠಾಣೆ | |
| ವಾಸ | : | ಚಿಕ್ಕಮಗಳೂರು | |

<u>ದಿನಾಂಕಃ 15-04-2026 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-</u>

ನಾನು 2016 ರಿಂದ 2022 ರವರೆಗೆ ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ ಹೆಚ್.ಸಿ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣದಲ್ಲಿ ದಿಃ16.03.2020 ರಂದು ತಲೆಮರೆಸಿಕೊಂಡ 2 ಮತ್ತು 3 ನೇ ಆರೋಪಿಯ ಪತ್ತೆ ಮಾಡಿ ವಶಕ್ಕೆ ಪಡೆದುಕೊಂಡು ಬರುವಂತೆ ಸೂಚನೆ ನೀಡಿದ್ದ ಮೇರೆಗೆ ಬೇಲೂರು ಪಟ್ಟಣಕ್ಕೆ ಹೋಗಿ 2 ಮತ್ತು 3 ನೇ ಆರೋಪಿಯ ಬಗ್ಗೆ ಭಾತ್ಮಿದಾರರಲ್ಲಿ ವಿಚಾರರಿಸಲಾಗಿ ಅವರಿಂದ ಯಾವುದೇ ಉಪಯುಕ್ತ ಮಾಹಿತಿ ಸಿಕ್ಕಿರುವುದಿಲ್ಲ. ನಂತರ ಬೇಲೂರು ಪೊಲೀಸ್ ಠಾಣೆಗೆ ಹೋಗಿ ಸದರಿ ಆರೋಪಿತರ ಮೇಲೆ ಯಾವುದಾದರೂ ಕೇಸು ಇದೆಯೇ ಎಂದು

ವಿಚಾರಿಸಲಾಗಿ ಅಲ್ಲಿಯೂ ಯಾವುದೇ ಮಾಹಿತಿ ಸಿಕ್ಕಿರುವುದಿಲ್ಲ. ನಂತರ ಹಗರೆ ಗ್ರಾಮಕ್ಕೆ ತೆರಳಿ ಅಲ್ಲಿಯೂ ಭಾತ್ಮಿದಾರರಲ್ಲಿ ಅಲ್ಲಿಯೂ ಯಾವುದೇ ಮಾಹಿತಿ ಸಿಕ್ಕಿರುವುದಿಲ್ಲ. ನಂತರ ಗೆಂಡೆಹಳ್ಳಿ ಗ್ರಾಮಕ್ಕೆ ತೆರಳಿ ಅಲ್ಲಿಯೂ ಆರೋಪಿತರ ಬಗ್ಗೆ ವಿಚಾರಿಸಲಾಗಿ ಅಲ್ಲಿಯೂ ಯಾವುದೇ ಮಾಹಿತಿ ಸಿಕ್ಕಿರುವುದಿಲ್ಲ. ನಂತರ ಪೊಲೀಸ್ ಠಾಣೆಗೆ ಮರಳಿ ಬಂದು ಈ ಬಗ್ಗೆ ನನ್ನ ವರದಿ ಸಲ್ಲಿಸಿರುತ್ತೇನೆ. ಸದರಿ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-11 ಎಂದು ಗುರುತಿಸಲಾಗಿ ನನ್ನ ಸಹಿ ನಿಪಿ-11(ಎ) ಇರುತ್ತದೆ.

<u>ಪಾಟೀ ಸವಾಲುಃ 5 ನೇ ಆರೋಪಿ ಪರ ವಕೀಲರಿಂದಃ-</u>

ನಾನು ಯಾವುದೇ ಸ್ಥಳಕ್ಕೂ ಹೋಗಿಲ್ಲ ಹಾಗೂ ಆರೋಪಿತರ ಬಗ್ಗೆ ವಿಚಾರಿಸಿಲ್ಲ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ 2, 3 ಮತ್ತು 4 ನೇ ಆರೋಪಿತರ ಪರ ವಕೀಲರಿಂದಃ-</u>

(2, 3 ಮತ್ತು 4 ನೇ ಆರೋಪಿ ಪರ ವಕೀಲರು 5 ನೇ ಆರೋಪಿ ಪರ ವಕೀಲರ ಪಾಟೀ ಸವಾಲನ್ನು ಅಳವಡಿಸಿಕೊಳ್ಳಲು ಕೋರಿದ್ದು ಅಳವಡಿಸಿದೆ).

<u>ಮರು ವಿಚಾರಣೆಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

C.C.No.1245/2021
PW-6 CW-16

ಎಸ್‌ಆರ್‌ಃ